ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 23ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 10.30 ಗಂಟೆಗೆ)

–

1. ಪ್ರಶ್ನೋತ್ತರ

ಅ)	ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹತ್ತನೇ ಪಟ್ಟಿ
ಆ)	ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹತ್ತನೇ ಪಟ್ಟಿ

2. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2022ನೇ ಸಾಲಿನ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಯು.ಟಿ. ಅಬ್ದುಲ್ ಖಾದರ್, ಕೆ.ಆರ್. ರಮೇಶ್ ಕುಮಾರ್, ಕೃಷ್ಣ ಬೈರೇಗೌಡ, ಈಶ್ವರ್ ಭೀಮಣ್ಣ ಖಂಡ್ರೆ, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ ಹಾಗೂ ಇತರರು** – ರಾಜ್ಯದಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ನೀಡಿರುವ ಅನುದಾನದಲ್ಲಿ ಶೇ. 40ಕ್ಕಿಂತ ಹೆಚ್ಚಿನ ಭ್ರಷ್ಟಾಚಾರ ನಡೆಯುತ್ತಿರುವ ಕುರಿತು ಗುತ್ತಿಗೆದಾರರ ಸಂಘದವರು ಮಾಡಿರುವ ಗಂಭೀರ ಆರೋಪದ ಬಗ್ಗೆ ಮತ್ತು **ಶ್ರೀಯುತರುಗಳಾದ ಪಿ. ರಾಜೀವ್, ಎಂ.ಪಿ. ಅಪ್ಪಚ್ಚು ರಂಜನ್, ಎ.ಎಸ್. ಜಯರಾಮ (ಮಸಾಲಾ ಜಯರಾಮ) ಹಾಗೂ ದಿನಕರ ಕೇಶವ ಶೆಟ್ಟಿ ಇವರುಗಳು** – 2018 ನೇ ಸಾಲಿಗೂ ಹಿಂದಿನ ಅವಧಿಯಲ್ಲಿ ನಡೆದಿರುವ ಹಗರಣಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

... 2/

2) **ಶ್ರೀಯುತರುಗಳಾದ ಜೆ.ಎನ್. ಗಣೇಶ, ಪ್ರಿಯಾಂಕ ಖರ್ಗೆ, ಕೆ. ರಾಘವೇಂದ್ರ ಬಸವರಾಜ ಹಿಟ್ನಾಳ್, ಎಲ್.ಎನ್. ನಿಸರ್ಗನಾರಾಯಣಸ್ವಾಮಿ, ರಿಜ್ವಾನ್ ಅರ್ಷದ್, ಅನಿಲ್ ಚಿಕ್ಕಮಾದು ಹಾಗೂ ಇತರರು** – ಪರಿಶಿಷ್ಟ ಪಂಗಡ ಜಾತಿಗೆ 7.5 ಮೀಸಲಾತಿ ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

3) **ಶ್ರೀಯುತರುಗಳಾದ ಪಿ.ಟಿ. ಪರಮೇಶ್ವರ ನಾಯಕ್, ಪ್ರಿಯಾಂಕ ಖರ್ಗೆ ಹಾಗೂ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಇವರುಗಳು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಅನುದಾನವನ್ನು ವಿಶೇಷ ಅನುದಾನ ನೆಪದಲ್ಲಿ ಪ್ರಭಾವಿ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

4) **ಶ್ರೀಯುತರುಗಳಾದ ದೊಡ್ಡನಗೌಡ ಜಿ. ಪಾಟೀಲ್, ವೀರಭದ್ರಯ್ಯ ಚರಂತಿಮಠ, ಬಸನಗೌಡ ರಾಮನಗೌಡ ಪಾಟೀಲ (ಯತ್ನಾಳ), ಸಿದ್ದು ಸವದಿ, ಡಿ.ಎಸ್. ಸುರೇಶ್ ಮತ್ತು ಅಭಯ ಪಾಟೀಲ ಇವರುಗಳು** – ರಾಜ್ಯದಲ್ಲಿನ ಹನಿ ನೀರಾವರಿ ಯೋಜನೆಗಳ ಸಾಧಕ ಮತ್ತು ಬಾಧಕಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

5) **ಶ್ರೀಯುತರುಗಳಾದ ಹೆಚ್. ಹಾಲಪ್ಪ, ಕೆ.ಬಿ. ಅಶೋಕ್ ನಾಯ್ಕ್ ಹಾಗೂ ಸುನಿಲ್ ಬಿಳಿಯಾ ನಾಯ್ಕ ಇವರುಗಳು** – ಶರಾವತಿ ಕಣಿವೆ ಜಲವಿದ್ಯುತ್ ಯೋಜನೆಯ ಪ್ರದೇಶದಲ್ಲಿನ ಜಮೀನುಗಳ ಮುಳುಗಡೆಯಿಂದ ಸಂತ್ರಸ್ತರಾದವರು ಸ್ಥಳಾಂತರಗೊಂಡು ಶಿವಮೊಗ್ಗ ಜಿಲ್ಲೆಯ ವಿವಿಧ ಭಾಗಗಳಲ್ಲಿ ವಾಸವಾಗಿರುವ ಸ್ಥಳಗಳ ಭೂಮಿಯನ್ನು ಅವರುಗಳಿಗೆ ಮಂಜೂರು ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

4. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2022ನೇ ಸಾಲಿನ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ಮಂಗಳೂರು ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಖರೀದಿಸಲಾಗಿರುವ ಲ್ಯಾಪ್‌ಟಾಪ್‌ಗಳ ಖರೀದಿ ಮತ್ತು ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಿನ ಹುದ್ದೆಗಳನ್ನು ನೇಮಕ ಮಾಡುವುದು ಸೇರಿದಂತೆ ನಡೆದಿರುವ ಅವ್ಯವಹಾರಗಳಿಗೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

2) **ಶ್ರೀ ಭೀಮಾ ನಾಯಕ್ ಎಲ್.ಬಿ.ಪಿ. ಅವರು** – ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 10 ಕೆರೆಗೆ ನೀರು ತುಂಬಿಸುವ ಯೋಜನೆಯನ್ನು ಪರಿಷ್ಕರಿಸಿ, 17 ಕೆರೆಗೆ ನೀರು ತುಂಬಿಸುವ ಯೋಜನೆಗೆ ಯೋಜನಾ ವರದಿಯೊಂದಿಗೆ ಸಲ್ಲಿಸಿರುವ ಪ್ರಸ್ತಾವನೆಯ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಈಶ್ವರ ಭೀಮಣ್ಣ ಖಂಡ್ರೆ ಅವರು** – ಮುಳುಗಡೆಯಿಂದ ಸಂತ್ರಸ್ತರಾದವರಿಗೆ ನ್ಯಾಯಾಲಯದ ತೀರ್ಪಿನ ಅನ್ವಯ ಗರಿಷ್ಠ ಪರಿಹಾರ ನೀಡಿರುವ ರೀತಿಯಲ್ಲಿಯೇ ಕಾರಂಜಾ ಜಲಾಶಯದಲ್ಲಿ ಭೂಮಿ ಮತ್ತು ಮನೆ ಕಳೆದುಕೊಂಡಿರುವ ಸಂತ್ರಸ್ತರಿಗೆ ಒಂದು ಬಾರಿಯ ವಿಶೇಷ ಪ್ಯಾಕೇಜ್, ಭೂಮಿಯ ಪರಿಹಾರ ನೀಡಿ ನ್ಯಾಯ ಸಮಾನತೆ ಕಾಪಾಡಲು ಹೆಚ್ಚಿನ ಪರಿಹಾರ ನೀಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

4) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ಬಸವನಬಾಗೇವಾಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮನಗೂಳಿ ಮತ್ತು ಗೊಳಸಂಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತ್ಯೇಕವಾಗಿ ಪರೀಕ್ಷಾ ಕೇಂದ್ರಗಳನ್ನು ತೆರೆಯುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ನರಸಿಂಹ ನಾಯಕ್ (ರಾಜುಗೌಡ) ಮತ್ತು ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರುಗಳು** – ಬೆಂಗಳೂರಿನಲ್ಲಿರುವ ಮಾಲ್‌ಗಳು ಪಾವತಿಸಬೇಕಾದ ಆಸ್ತಿ ತೆರಿಗೆಯನ್ನು ಕ್ರಮಬದ್ಧವಾಗಿ ಪಾವತಿಸದೇ ಇರುವ ಬಗ್ಗೆ ಮಹಾಲೇಖಪಾಲರು ನೀಡಿರುವ ವರದಿಯಂತೆ ಕೈಗೊಂಡಿರುವ ಕ್ರಮದ ಕುರಿತು ಹಾಗೂ ಬನ್ನೇರುಘಟ್ಟ ರಸ್ತೆಯಲ್ಲಿರುವ ಮೀನಾಕ್ಷಿ ಮಹಲ್‌ನವರು ಪಾವತಿಸಬೇಕಾಗಿರುವ ಬಾಕಿ ಆಸ್ತಿ ತೆರಿಗೆ ಮೊತ್ತದ ಜೊತೆಗೆ ಬಡ್ಡಿ ಮತ್ತು ದಂಡವನ್ನು ಸೇರಿಸಿ ವಸೂಲು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಶ್ರೀ ಎಲ್. ನಾಗೇಂದ್ರ ಅವರು** – ಮೈಸೂರು ನಗರದಲ್ಲಿ ನಿರ್ಮಾಣ ಮಾಡುತ್ತಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನದ ಎರಡನೇ ಹಂತದ ಅನುದಾನದ ಬಿಡುಗಡೆಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

... 4/

7) **ಡಾ. ಕೆ. ಶ್ರೀನಿವಾಸಮೂರ್ತಿ ಅವರು** – ನೆಲಮಂಗಲ ವಿಧಾನಸಭಾ ಕ್ಷೇತ್ರದ ದಾಬಸ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕೊಲೆ ಪ್ರಯತ್ನ ನಡೆದ ಘಟನೆಗೆ ಸಂಬಂಧಿಸಿದಂತೆ ಎಫ್.ಐ.ಆರ್. ನಲ್ಲಿ ಮಾಜಿ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರ ಹೆಸರನ್ನು ಉಲ್ಲೇಖಿಸದೇ ಇದ್ದರೂ ದುರುದ್ದೇಶದಿಂದ ಜೈಲಿಗೆ ಕಳುಹಿಸಿರುವ ಸಬ್ ಇನ್ಸ್‌ಪೆಕ್ಟರ್‌ರವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಬೇಲೂರು ತಾಲ್ಲೂಕು ಐದಳ್ಳಿ ಜಮೀನು ರೈತರುಗಳಿಗೆ ಮಂಜೂರಾಗಿರುವ ಸರ್ವೆ ನಂಬರ್ ಅದಲು ಬದಲಾಗಿರುವುದರಿಂದ ಎತ್ತಿನಹೊಳೆ ಯೋಜನೆಗೆ ಸ್ವಾಧೀನಪಡಿಸಿಕೊಂಡಿರುವ ಜಮೀನಿಗೆ ಪರಿಹಾರ ದೊರೆಯದಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಂ. ಅಶ್ವಿನ್ ಕುಮಾರ್ ಅವರು** – ಟಿ. ನರಸೀಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾರ್ವಜನಿಕರು, ವಿದ್ಯಾರ್ಥಿಗಳು, ಕಾರ್ಮಿಕರು ಹಾಗೂ ಇತರರಿಗೆ ಓಡಾಡಲು ಸಮರ್ಪಕ ಬಸ್ ವ್ಯವಸ್ಥೆ ಇಲ್ಲದೆ ತೊಂದರೆ ಉಂಟಾಗಿರುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎಸ್. ರಾಮಪ್ಪ ಅವರು – ಶಾಲಾ ಕಟ್ಟಡಗಳ ದುರಸ್ತಿ ಬಗ್ಗೆ ದಿನಾಂಕ: 15.09.2022 ರಂದು ನಾಲ್ಕನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 58(500)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm